ಬೆಳಗಾವಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ವಸತಿ ನಿಲಯ ಹಾಗೂ ವಸತಿ ಶಾಲೆ ಏವರ

590(805) ಶ್ರೀ ಡೊಂಗರಗಾವ ಶಹಜಹಾನ್ ಇಸ್ಮಾಯಿಲ್ (ಅಥಣಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಮುಸ್ಲಿಂ ಅಲ್ಪಸಂಖ್ಯಾತರಿಗಾಗಿ ಇಲ್ಲಿಯವರೆಗೆ ಸರ್ಕಾರದಿಂದ ನಡೆಯುವ ವಸತಿ ನಿಲಯಗಳೆಷ್ಟು? ಸರ್ಕಾರದಿಂದ ಅನುದಾನ ಪಡೆಯುಸಖಾಸಗಿ ವಿದ್ಯಾರ್ಥಿನಿಲಯಗಳೆಷ್ಟು?

ಆ) ಜಿಲ್ಲೆಯಲ್ಲಿ ಹಾಲಿ ನಡೆಯುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳು ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಸರ್ಕಾರ ನಿಗದಿಪಡಿಸಿರುವ ಮಾನದಂಡಕ್ಕೆ ಅನುಗುಣವಾಗಿದೆಯೆ: ಅಥವಾ ಇಲ್ಲವೆ; ಈ ಕುರಿತು ಸರ್ಕಾರ ಸೌಲಭ್ಯಗಳನ್ನು ಕಲ್ಪಿಸಲು ಕೈಗೊಂಡ ಕ್ರಮಗಳೇನು?

ಇ) ಇಲ್ಲಿ ಸರ್ಕಾರದಿಂದ ಹೆಚ್ಚಿನ ಶೈಕ್ಷಣಿಕ ಸಂಸ್ಥೆಗಳಿದ್ದರೂ ಸಹ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಮಹಾರಾಷ್ಟ್ರ ಗಡಿಭಾಗದ ಜನರು ಶೈಕ್ಷಣಿಕ ಸೌಲಭ್ಯದಿಂದ ವಂಚಿತರಾಗಿರುವುದು ನಿಜವಲ್ಲವೆ:

ಈ) ಅಥಣಿ ತಾಲ್ಲೂಕಿನಲ್ಲಿ ಜೈನ್ ಮತ್ತು ಮುಸ್ಲಿಂ ಅಲ್ಪಸಂಖ್ಯಾತರ ಜನಸಂಖ್ಯೆ ಸುಮಾರು ಒಂದು ಲಕ್ಷಕ್ಕೂ ಹೆಚ್ಚಿಗೆ ಇದ್ದು ಇಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆ ಪ್ರಾರಂಭಿಸಲು ಜನರಿಂದ ಒತ್ತಾಯ ಬಂದಿದೆಯೆ; ಬಂದಿದ್ದಲ್ಲಿ, ಇದಕ್ಕೆ ಸರ್ಕಾರ ಅನುಮೋದನೆ ನೀಡಲಾಗಿದೆಯೇ

ಉ) ಇಲ್ಲದಿದ್ದಲ್ಲಿ,ಇದರ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮವೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಒಂದು ಇದಲ್ಲದೆ ಅಲ್ಪಸಂಖ್ಯಾತರ ಖಾಸಗಿ ಸಂಸ್ಥೆಗಳು ನಡೆಸುವ 7 ವಿದ್ಯಾರ್ಥಿನಿಲಯಗಳಿಗೆ ಭೋಜನಾ ವೆಚ್ಚದ ಅನುದಾನ ನೀಡಲಾಗುತ್ತಿದೆ.

ಆ) ಹಾಲಿ ನಡೆಯುತ್ತಿರುವ ಅಲ್ಪಸಂಖ್ಯಾತರ ಖಾಸಗಿ ವಿದ್ಯಾರ್ಥಿನಿಲಯಗಳು ಹಾಗೂ ವಸತಿ ಶಾಲೆಗಳು ಸರ್ಕಾರ ನಿಗದಿಪಡಿಸಿರುವ ಮಾನದಂಡಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿವೆ.

ಇ) ಇಲ್ಲ

ಈ) ಬೆಳಗಾವಿ ಜಿಲ್ಲೆಯಲ್ಲಿ ಈಗಾಗಲೇ ಒಂದು ಮೊರಾರ್ಜಿದೇಸಾಯಿ ವಸತಿಶಾಲೆಯನ್ನು ಪ್ರಾರಂಭಿಸಲಾಗಿದೆ. ಹೊಸದಾಗಿ ವಸತಿ ಶಾಲೆ ಪ್ರಾರಂಭಿಸಲು ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.